# ಸಹಾಯಕ ಆಯುಕ್ತರ ನ್ಯಾಯಾಲಯ, ಬಳ್ಳಾರಿ

ಸಂ: ಕಂದಾಯ/ಅಪೀಲು/193/2013-14

ದಿನಾಂಕ : 30 /08/ 2016

ಉಪಸ್ಥಿತರು: ಶ್ರೀಲೋಕೇಶ್.ಪಿ.ಎನ್. (ಕ.ಆ.ಸೇ)

ಸಹಾಯಕ ಆಯುಕ್ತರು, ಬಳ್ಳಾರಿ.

| ವಾದಿಗಳು | ಪ್ರತಿವಾದಿಗಳು |
|---|---|
| 1.ಶ್ರೀಮತಿ ಲಕ್ಷ್ಮಮ್ಮ ಗಂಡ ಲೇಟ್ ಬಸಪ್ಪ,<br>ಬೂದುಗುಪ್ಪ ಗ್ರಾಮ, ಸಿರುಗುಪ್ಪ ತಾಲ್ಲೂಕು<br><br>(ಶ್ರೀ ಡಿ.ನಾರಾಯಣ, ವಕೀಲರು, ಬಳ್ಳಾರಿ) | 1.ತಹಶೀಲ್ದಾರರು, ಸಿರುಗುಪ್ಪ<br>2.ಕಂದಾಯ ನಿರೀಕ್ಷಕರು,ಕರೂರು<br>3.ಗ್ರಾಮಲೆಕ್ಕಾಧಿಕಾರಿಗಳು,ಬೂದುಗುಪ್ಪ<br>4.ಶ್ರೀಮತಿ ಪಾರ್ವತಮ್ಮ ಗಂಡ ಶಿವಪ್ಪ ಬೂದುಗುಪ್ಪ ಗ್ರಾಮ, ಸಿರುಗುಪ್ಪ ತಾಲ್ಲೂಕು |

ದಾವಾ ಜಮೀನಿನ ವಿವರ :-

| ತಾಲ್ಲೂಕು | ಗ್ರಾಮ | ಸ. ನಂ. | ವಿಸ್ತೀರ್ಣ (ಎಕರೆಗಳಲ್ಲಿ) |
|---|---|---|---|
| ಸಿರುಗುಪ್ಪ | ಬೂದುಗುಪ್ಪ | 49/ಎ | 1.57 |

--@@@--

ವಾದಿಯು ಅವರ ವಕೀಲರ ಮುಖಾಂತರ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(2) ರಡಿಯಲ್ಲಿ ಕಂದಾಯ ನಿರೀಕ್ಷಕರು,ಕರೂರು ಇವರ ಎಂ.ಆರ್.ನಂ.32/1997-98,ರ ಆದೇಶದ ವಿರುದ್ಧ ಈ ನ್ಯಾಯಾಲಯಕ್ಕೆ ಮೇಲ್ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮೇಲ್ಮನವಿಯನ್ನು ಸಲ್ಲಿಸುವಲ್ಲಿ ಆದ ವಿಳಂಬಕ್ಕೆ ಕಾಲಮಿತಿ ಕಾಯ್ದೆಯಡಿ ವಿಳಂಬ ಮನ್ನಾಕ್ಕೆ ಅರ್ಜಿ ಸಲ್ಲಿಸಿರುತ್ತಾರೆ. ವಿಳಂಬ ಮನ್ನಾ ಮಾಡಿ ಪ್ರಕರಣವನ್ನು ದಾಖಲಿಸಿಕೊಳ್ಳಲಾಗಿರುತ್ತದೆ. ನೈಸರ್ಗಿಕ ನ್ಯಾಯ ದೃಷ್ಠಿಯಿಂದ ಉಭಯ ಪಕ್ಷಗಾರರಿಗೂ ನೋಟೀಸಗಳನ್ನು ಕಳುಹಿಸಿ ದಿನಾಂಕ:05.11.2013, 24.03.2015, 07.07.2015, 29.03.2016,30.08.2016, ಗಳಂದು ಪ್ರಕರಣದ ವಿಚಾರಣೆಯನ್ನು ಕೈಗೊಳ್ಳಲಾಗಿರುತ್ತದೆ.

ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಾದಿಗಳು ಈ ನ್ಯಾಯಾಲಯಕ್ಕೆ ಮೇಲ್ಮನವಿಯನ್ನು ಸಲ್ಲಿಸಿ ಸಿರುಗುಪ್ಪ ತಾಲೂಕು ಬೂದುಗುಪ್ಪ ಗ್ರಾಮದ ಸ.ನಂ.49/ಎ ವಿಸ್ತೀರ್ಣ:1.57 ಎಕರೆ ಜಮೀನಿಗೆ ಸಂಬಂಧಿಸಿದಂತೆ ಕಂದಾಯ ನಿರೀಕ್ಷಕರು,ಕರೂರು ಇವರ ಎಂ.ಆರ್.ನಂ.32/1997-98, ಆದೇಶವನ್ನು ಪ್ರಶ್ನಿಸುತ್ತಾರೆ, ಗೈರು ಮಂಜೂರು ಆದೇಶವನ್ನು ರದ್ದು ಪಡಿಸಿ,ವಾದಿಯ ಹೆಸರಿಗೆ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ಕಾರಣ ಸದರಿ ವಿವಾದಿತ ಜಮೀನಿನ ಪ್ರಕರಣಕ್ಕೆ ಸಂಬಂಧಿಸಿದಂತೆ ವಾದಿಗಳು ಸಲ್ಲಿಸಿರುವ ಕ್ರಯ ಪತ್ರ, ಪಹಣಿ, ಪರಿಶೀಲಿಸಲಾಗಿ ಸದರಿ ಸರ್ವೆ ನಂಬರ್ ನಲ್ಲಿ ಯಾವುದೇ ಪೋಡಿ/ಹಿಸ್ಸಾ ಆಗದೇ ಫೈಕಿ RTC ಗಳಾಗಿದ್ದು,ಅದರಂತೆ ಮೇಲ್ಮನವಿದಾರರು ಖರೀದಿಸಿದಂತೆ RTC ಗಳು ಬಂದಿರುವುದಿಲ್ಲ.ಈ ಕುರಿತು ಅಗತ್ಯ ತಿದ್ದುಪಡಿ ಜರುಗಿಸುವುದು ಅಗತ್ಯವಿರುವುದರಿಂದ ಈ ಕೆಳಕಂಡ ಆದೇಶ.

ಮುಂದಿನ ಪುಟಕ್ಕೆ.....

:: ಆದೇಶ ::

ಮೇಲ್ಮನವಿಯನ್ನು ಭಾಗಶ: ಪುರಸ್ಕರಿಸಿದೆ.

ಪೀಠಿಕೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ಸಿರುಗುಪ್ಪ ತಾಲ್ಲೂಕಿನ ಬೂದುಗುಪ್ಪ ಗ್ರಾಮದ ಸ.ನಂ.49/ಎ ವಿಸ್ತೀರ್ಣ:1.57 ಎಕರೆ ಜಮೀನಿಗೆ ಸಂಬಂಧಿಸಿದಂತೆ ಮೂಲ ಕಂದಾಯ ದಾಖಲೆಗಳನ್ನು ಹಾಗೂ ಅಪೀಲುದಾರರ ಕ್ರಯ ಪತ್ರ ಆಧಾರಿಸಿ ಅಗತ್ಯ ತಿದ್ದುಪಡಿ ಪ್ರಸ್ತಾವನೆ ಸಲ್ಲಿಸಿ,ಈ ಪ್ರಾಧಿಕಾರದ ಅನುಮೋದನೆ ಪಡೆಯಲು ತಹಶೀಲ್ದಾರರು,ಸಿರುಗುಪ್ಪ ಇವರಿಗೆ ಆದೇಶಿಸಿದೆ.

ಈ ಆದೇಶವನ್ನು ಹೇಳಿ, ಬರೆಯಿಸಿ ತಪ್ಪುಗಳನ್ನು ತಿದ್ದಿ ದಿನಾಂಕ: **30-08-2016** ರಂದು ಬಹಿರಂಗ ನ್ಯಾಯಾಲಯದಲ್ಲಿ ಘೋಷಿಸಲಾಗಿದೆ.

ಸಹಾಯಕ ಆಯುಕ್ತರು,
ಬಳ್ಳಾರಿ.

ಸಹಾಯಕ ಆಯುಕ್ತರು,
ಬಳ್ಳಾರಿ.

**ಪ್ರತಿಯನ್ನು : ವಾದಿ ಮತ್ತು ಪ್ರತಿವಾದಿಗಳಿಗೆ ಮತ್ತು ತಹಶೀಲ್ದಾರರು ಸಿರುಗುಪ್ಪ ಇವರಿಗೆ**